ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ/02/ಎಸಿಎಂ(2)/2018-19

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001,
ದಿನಾಂಕ: 28-05-2018.

-:: ಸುತ್ತೋಲೆ ::-

**ವಿಷಯ:** 2018-19ನೇ ಸಾಲಿನ ಸರ್ಕಾರಿ ಕಿರಿಯ ತಾಂತ್ರಿಕ ಶಿಕ್ಷಣ ಶಾಲೆಗಳಲ್ಲಿ 8ನೇ ತರಗತಿಯ ಪ್ರವೇಶ ಸಂಬಂಧ ಅರ್ಜಿಗಳನ್ನು ಸ್ವೀಕರಿಸಲು ಅವಧಿ ವಿಸ್ತರಿಸುವ ಬಗ್ಗೆ.

**ಉಲ್ಲೇಖ:**
1. ಪ್ರಾಂಶುಪಾಲರು, ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ, ಬಳ್ಳಾರಿ ಇವರ ಪತ್ರ ಸಂ. ಜೆಟಿಎಸ್(ಬ)/ಪ್ರ.ವಿ/2018-19/04, ದಿ:19-05-2018.
2. ಈ ಕಛೇರಿ ಪ್ರವೇಶಾಧಿಸೂಚನೆ ಪತ್ರ ದಿ:10-04-2018.

-0000000-

**2018-19ನೇ ಸಾಲಿನ** ಸರ್ಕಾರಿ ಕಿರಿಯ ತಾಂತ್ರಿಕ ಶಿಕ್ಷಣ ಶಾಲೆಗಳಲ್ಲಿ 8ನೇ ತರಗತಿಯ ಪ್ರವೇಶಕ್ಕೆ ಸಂಬಂಧಿಸಿದಂತೆ, ಹರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಸ್ವೀಕರಿಸಲು **ದಿನಾಂಕ:19-05-2018** ಎಂದು ನಿಗಧಿಪಡಿಸಿ ಉಲ್ಲೇಖಿತ ಈ ಕಛೇರಿ ಪ್ರವೇಶಾಧಿಸೂಚನೆಯಲ್ಲಿ ಸೂಚಿಸಲಾಗಿತ್ತು.

ಉಲ್ಲೇಖ(2)ರ ಪ್ರಾಂಶುಪಾಲರ ಪತ್ರದಲ್ಲಿ ಅಭ್ಯರ್ಥಿಗಳಿಂದ ಅರ್ಜಿ ಸ್ವೀಕರಿಸಲು ಅಂತಿಮ ದಿನಾಂಕವನ್ನು ವಿಸ್ತರಿಸಬೇಕೆಂದು ಕೋರಿರುತ್ತಾರೆ. ಈ ಸಂಬಂಧದಲ್ಲಿ ಪ್ರಿನ್ಸಿಪಾಲರ ಮನವಿಯನ್ನು ಪರಿಗಣಿಸಿ ವಿದ್ಯಾರ್ಥಿಗಳ ಶೈಕ್ಷಣಿಕ ಹಾಗೂ ಸಾರ್ವಜನಿಕರ ಹಿತದೃಷ್ಟಿಯ ಮೇರೆಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಸ್ವೀಕರಿಸಲು **ದಿ:08-06-2018** ರವರೆಗೆ ಅವಧಿಯನ್ನು ವಿಸ್ತರಿಸಿ ಅನುಮತಿ ನೀಡಲಾಗಿದೆ.

ಮೇಲೆ ನಮೂದಿಸಿರುವಂತೆ ಕೂಡಲೇ ಕ್ರಮ ತೆಗೆದುಕೊಂಡು ಈ ಬಗ್ಗೆ ಸ್ಥಳೀಯವಾಗಿ ಪತ್ರಿಕಾ ಪ್ರಕಟಣೆಯನ್ನು ನೀಡಿ, ನಿಯಮಗಳ ಪ್ರಕಾರ ಪ್ರವೇಶ ಪ್ರಕ್ರಿಯೆಯನ್ನು ಪ್ರಿನ್ಸಿಪಾಲರು ತಮ್ಮ ಹಂತದಲ್ಲಿಯೇ ಅರ್ಹ ಅಭ್ಯರ್ಥಿಗಳ ಪ್ರವೇಶ ಪ್ರಕ್ರಿಯೆ ಪೂರ್ಣಗೊಳಿಸತಕ್ಕದ್ದು. ಪ್ರವೇಶಾವಧಿಯನ್ನು ಪುನಃ ವಿಸ್ತರಿಸಲಾಗುವುದಿಲ್ಲ. **ಪ್ರಯುಕ್ತ, ಇದನ್ನು ಗಮನದಲ್ಲಿರಿಸಿಕೊಂಡು ನಿಯಮಗಳ ಪ್ರಕಾರ ಪ್ರವೇಶವನ್ನು ಪೂರೈಸುವಲ್ಲಿ ಕ್ರಮ ತೆಗೆದುಕೊಳ್ಳಬೇಕೆಂದು ತಿಳಿಸಲಾಗಿದೆ.**

ನಿರ್ದೇಶಕರು

ಎಲ್ಲಾ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಪ್ರಿನ್ಸಿಪಾಲರಿಗೆ - **ಮೇಲ್ಕಂಡ ಸುತ್ತೋಲೆಯನ್ನು ಸೂಚನಾ ಫಲಕದಲ್ಲಿ ಪ್ರಕಟಿಸಿ ಅಭ್ಯರ್ಥಿಗಳಿಗೆ** ವಿವರವಾದ ಮಾಹಿತಿಯನ್ನು ನೀಡುವುದು ಹಾಗೂ ಹಾಲಿ ಜಾರಿಯಲ್ಲಿರುವ ನಿಯಮಗಳಂತೆಯೇ ಈ ಸಾಲಿನಲ್ಲೂ ಅರ್ಜಿಗಳನ್ನು ಕಲ್ಲಚ್ಚು ಮಾಡಿಸಿ ಅಭ್ಯರ್ಥಿಗಳಿಗೆ ವಿತರಿಸುವುದು. ಅರ್ಜಿಯ ಎರಡು ಪ್ರತಿಗಳನ್ನು ಮಾಹಿತಿಗಾಗಿ ನಿರ್ದೇಶನಾಲಯಕ್ಕೆ ಕಳುಹಿಸತಕ್ಕದ್ದು. ಹಾಗೂ ವಸೂಲಾದ ಅರ್ಜಿಯ ಶುಲ್ಕವನ್ನು **ಆಗಿಂದಾಗ್ಗೆ ಸರ್ಕಾರಕ್ಕೆ ಜಮಾ ಮಾಡಿ ನಿರ್ದೇಶನಾಲಯಕ್ಕೆ ವರದಿ ಮಾಡುವುದು.**

**ಪ್ರತಿ ಮಾಹಿತಿಗಾಗಿ:–**

1. ಕಾರ್ಯದರ್ಶಿಗಳು, ತಾಂತ್ರಿಕ ಪರೀಕ್ಷಾ ಮಂಡಳಿ, ಬೆಂಗಳೂರು.
2. ಜಂಟಿ ನಿರ್ದೇಶಕರು(ಯೋಜನೆ), ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
3. ಆಡಳಿತಾಧಿಕಾರಿಗಳು, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
4. ಸಾರ್ವಜನಿಕ ಸಂಪರ್ಕಾಧಿಕಾರಿಗಳು, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
5. ಸಂಯೋಜನಾಧಿಕಾರಿಗಳು, ಇ–ಆಡಳಿತ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು – ನಿರ್ದೇಶನಾಲಯದ ವೆಬ್‌ಸೈಟ್‌ನಲ್ಲಿ ಸದರಿ ಸುತ್ತೋಲೆಯನ್ನು ಪ್ರಚುರಪಡಿಸುವುದು.
6. ನಿರ್ದೇಶಕರ ಆಪ್ತಶಾಖೆಗೆ – ಮಾಹಿತಿಗಾಗಿ.
7. ಡಿವಿಪಿ(2) ವಿಭಾಗಕ್ಕೆ – ಮಾಹಿತಿಗಾಗಿ
8. ಕಛೇರಿ ಪ್ರತಿ.